ರಾಜ್ಯದಲ್ಲಿ ಭೂ ಅಕ್ರಮ-ಸಕ್ರಮ ಕಾಯಿದೆ ಕುರಿತು.

907(847) ಶ್ರೀ ವಸಂತ ವಿ. ಸಾಲಿಯಾನ (ಕಾಪು) :— ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಭೂ ಸುಧಾರಣಾ ತಿದ್ದುಪಡಿ ಕಾಯಿದೆಯನ್ವಯ ನಮೂನೆ ಸಂಖ್ಯೆ 7ಎ ರಂತೆ ಭೂ ಒಡೆತನ ಕೋರಿ ಸಲ್ಲಿಸಲ್ಪಟ್ಟ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು).

ಆ) ರಾಜ್ಯದಲ್ಲಿ ಭೂ ಅಕ್ರಮ-ಸಕ್ರಮ ಕಾಯಿದೆಯನ್ವಯ ನಮೂನೆ ಸಂಖ್ಯೆ 52ರಂತೆ ಭೂ ಸಕ್ರಮೀಕರಣ ಕೋರಿ ಸಲ್ಲಿಸಲ್ಪಟ್ಟ ಅರ್ಜಿಗಳ ಒಟ್ಟು ಸಂಖ್ಯೆ ಎಷ್ಟು; ಅವುಗಳ ಕಾರ್ಯ ಈಗ ಯಾವ ಹಂತದಲ್ಲಿದೆ? (ತಾಲ್ಲೂಕುವಾರು ವಿವರ ನೀಡುವುದು).

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :—

ಅ), ಆ) ಈ ಎರಡು ಕಾಯ್ದೆಗಳಡಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 30-4-99ರವರೆಗೆ ಮುಂದೂಡಲಾಗಿದೆ. ಅರ್ಜಿ ಸಲ್ಲಿಸುವ ಕಾರ್ಯವಿಧಾನ ಇನ್ನೂ ಮುಂದುವರೆಯುತ್ತಿರುವುದರಿಂದ, ಈ ಹಂತದಲ್ಲಿ ಮಾಹಿತಿ ಸಲ್ಲಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ರಾಷ್ಟ್ರೀಕೃತ ರೂಟ್‌ಗಳಲ್ಲಿ ಸಾರಿಗೆ ವ್ಯವಸ್ಥೆ.

908(638) ಶ್ರೀ ಡಿ.ವಿ. ಸದಾನಂದ ಗೌಡ (ಪುತ್ತೂರು) :— ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಷ್ಟ್ರೀಕೃತ ರೂಟ್‌ಗಳಲ್ಲಿ ಸಾರಿಗೆ ವ್ಯವಸ್ಥೆ ಮಾಡಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಅಸಮರ್ಪಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸಾರ್ವಜನಿಕ ಸಾಗಣೆ ಸಂಪರ್ಕ ವ್ಯವಸ್ಥೆ ರೂಪಿಸಲು ಹೊಸ ನೀತಿಯನ್ನು ಅಳವಡಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) :—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.